9-72-29 5

## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಇವರು ನಿಯಮ 72ರಡಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಬಗ್ಗೆ.**

**ಪ್ರಶ್ನೆ:**

ಸರ್ಕಾರವು ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗ ಮತ್ತು ಇತರೆ ನೇಮಕಾತಿ ಪ್ರಾಧಿಕಾರಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಿ ಆದೇಶ ಪತ್ರಗಳನ್ನು ನೀಡುವುದು ಬಾಕಿ ಇರುತ್ತದೆ. ಇಂತಹ ಕೊನೆಯ ಸಮಯದಲ್ಲಿ ಕೋವಿಡ್-19ನ ಆರ್ಥಿಕ ಸಂಕಷ್ಟದ ನೆಪವೊಡ್ಡಿ ಈ ನೇಮಕಾತಿಗಳನ್ನು ತಡೆ ಮಾಡಿರುವುದು ಸಾವಿರಾರು ನಿರುದ್ಯೋಗಿ ಅಭ್ಯರ್ಥಿಗಳಿಗೆ ಸಿಡಿಲು ಬಡಿದಂತಾಗಿದೆ. ಇದರ ಸಂಬಂಧ ಈಗಾಗಲೇ ಅನೇಕ ಪ್ರತಿಭಟನೆಗಳು ನಡೆಯುತ್ತಿವೆ. ಆದ್ದರಿಂದ ಸರ್ಕಾರವು ಈಗಾಗಲೇ ನೇಮಕಾತಿ ಪೂರ್ಣಗೊಂಡಿರುವ ಸಂಬಂಧ ಎಲ್ಲಾ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಪತ್ರಗಳನ್ನು ನೀಡಿ ಅನುಕೂಲ ಮಾಡಿ ಕೊಡುವ ಸಂಬಂಧ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯ ಬಯಸುತ್ತೇನೆ.

**ಮಾನ್ಯ ಮುಖ್ಯಮಂತ್ರಿಗಳ ಉತ್ತರ:**

ರಾಜ್ಯದಲ್ಲಿ ಕೋವಿಡ್-19 ನಿಂದ ಉಂಟಾದ ಪರಿಸ್ಥಿತಿಯನ್ನು ನಿಭಾಯಿಸಿ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಮತ್ತು ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಅವಶ್ಯಕವಾಗಿರುತ್ತದೆ. ಈ ನಿಟ್ಟಿನಲ್ಲಿ 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಮಾತ್ರ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್ ಲಾಗ್ ಹುದ್ದೆಗಳೂ ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆ. ಈಗಾಗಲೇ ಆರ್ಥಿಕ ಇಲಾಖೆಯ ಅನುಮತಿ ಪಡೆದು ನೇಮಕಾತಿಯ ವಿವಿಧ ಹಂತಗಳಲ್ಲಿರುವ ಹುದ್ದೆಗಳಿಗೂ ಸಹ ಈ ಆದೇಶ ಅನ್ವಯವಾಗುತ್ತದೆ ಎಂದು ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ: 06.07.2020ರಲ್ಲಿ ತಿಳಿಸಲಾಗಿದೆ.

ಆದಾಗ್ಯೂ, ಅಭ್ಯರ್ಥಿಗಳ ಸೇವಾಹಿರಿತನದಲ್ಲಿ ತೊಂದರೆಯಾಗಬಾರದು ಎಂಬ ಅಂಶವನ್ನು ಪರಿಗಣಿಸಿ, ಕರ್ನಾಟಕ ಲೋಕಸೇವಾ ಆಯೋಗ/ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮತ್ತು ಇನ್ನಿತರೆ ಆಯ್ಕೆ ಮಂಡಳಿಗಳಿಂದ ಒಂದೇ ಅಧಿಸೂಚನೆ ಮತ್ತು ಒಂದು ಇಲಾಖೆಯಲ್ಲಿ ಆಯ್ಕೆಗೊಂಡ ಕೆಲವು ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಿದ್ದು, ಕಾರಣಾಂತರಗಳಿಂದ ಇನ್ನೂ ಕೆಲವು ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಬಾಕಿ ಇರುವ ಪ್ರಕರಣಗಳನ್ನು ಇಲಾಖಾವಾರು ಪರಿಶೀಲಿಸಿ ಅಂತಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಕ್ರಮವಹಿಸಲಾಗುತ್ತಿದೆ.

ಅಲ್ಲದೇ, ಕೋವಿಡ್-19 ತುರ್ತುಸೇವೆಗಳಿಗಾಗಿ ಅಗತ್ಯವಾಗಿರುವ ಹುದ್ದೆಗಳನ್ನು ಮತ್ತು ಮಾನ್ಯ ನ್ಯಾಯಲಯಗಳು ಈಗಾಗಲೇ ನಿರ್ದೇಶನ ನೀಡಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ದಿನಾಂಕ: 06.07.2020ರ ಸುತ್ತೋಲೆಯಿಂದ ವಿನಾಯಿತಿ ನೀಡಲಾಗಿದೆ.

---

ಸಂಖ್ಯೆ: ಆಇ 72 ಬಿಜಿಎಲ್ 2020

ಬಿ.ಎಸ್. ಯಡಿಯೂರಪ್ಪ

(ಬಿ. ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ